Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

24.06.2024 14.30 hrs

<><*<><>*><>

ಮುಖ್ಯಾಂಶಗಳು

- **ವಿಧಾನ ಪರಿಷತ್ ನೂತನ ಸದಸ್ಯರಿಗೆ ಪ್ರಮಾಣ ವಚನ ಬೋಧಿಸಿದ ಸಭಾಪತಿ ಬಸವರಾಜ ಹೊರಟ್ಟಿ**
- **ನೀಟ್-ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ ; ಕೇಂದ್ರ ಸರ್ಕಾರದಿಂದ ಚುರುಕುಗೊಂಡ ತನಿಖೆ**
- **ಹಾಸನ ಜಿಲ್ಲೆ ಮುತ್ತಿಗೆ ಗ್ರಾಮದ ಮೃತರ ಕುಟುಂಬಕ್ಕೆ ಪರಿಹಾರ ಹಣ ವಿತರಿಸಿದ ಗೃಹ ಸಚಿವ ಜಿ. ಪರಮೇಶ್ವರ್**
- **ತುರ್ತು ಪರಿಸ್ಥಿತಿ ಹೇರಿದ ಕಾಂಗ್ರೆಸ್ ಪಕ್ಷದ ನಾಯಕರು ಕ್ಷಮೆಯಾಚಿಸುವಂತೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆಗ್ರಹ**

<><*<><>*><>

ವಿಧಾನ ಪರಿಷತ್‌ಗೆ ನೂತನವಾಗಿ ಆಯ್ಕೆಯಾದ ೧೧ ಮಂದಿ ವಿಧಾನ ಪರಿಷತ್ ಸದಸ್ಯರು ಇಂದು ವಿಧಾನಸೌಧದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನೂತನ ಶಾಸಕರ ಪ್ರಮಾಣ ವಚನ ಸ್ವೀಕಾರ ಸಮಾರಂಭ ಏರ್ಪಡಿಸಲಾಗಿತ್ತು. ಇದೇ ಸಂದರ್ಭದಲ್ಲಿ ಶಿಕ್ಷಕರ ಮತ್ತು ಪದವೀಧರ ಕ್ಷೇತ್ರದಿಂದ ಆಯ್ಕೆಯಾದ ೬ ಮಂದಿ ಪರಿಷತ್ ಸದಸ್ಯರು ಪ್ರತಿಜ್ಞಾವಿಧಿ ಸ್ವೀಕರಿಸಿದರು. ಐವಾನ್ ಡಿ-ಸೋಜಾ, ಕೆ. ಗೋವಿಂದರಾಜ್, ಜಗದೇವ ಗುತ್ತೇದಾರ್, ಬಲ್ಕೀಸ್ ಬಾನು, ಎನ್.ಎಸ್. ಬೋಸರಾಜು, ಡಾ. ಯತೀಂದ್ರ ಎಸ್., ಎ. ವಸಂತ ಕುಮಾರ, ಮೂಲೆ ಮಾರುತಿರಾವ್, ಟಿ.ಎನ್. ಜವರಾಯಿ ಗೌಡ, ಸಿ.ಟಿ.ರವಿ ಮತ್ತು ಎನ್.ರವಿಕುಮಾರ್ ಪ್ರಮಾಣ ವಚನ ಸ್ವೀಕರಿಸಿದರು. ಇದೇ ವೇಳೆ ಪದವೀಧರರ ಮತ್ತು ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ ಗೆ ಆಯ್ಕೆಯಾದ ಚಂದ್ರಶೇಖರ ಪಾಟೀಲ್ ಬಸವರಾಜ, ಡಾ. ಧನಂಜಯ್ ಸರ್ಜಿ, ರಾಮೋಜಿಗೌಡ, ಎಸ್.ಎಲ್. ಭೋಜೇಗೌಡ, ಕೆ. ವಿವೇಕಾನಂದ ಹಾಗೂ ಡಿ.ಟಿ.ಶ್ರೀನಿವಾಸ್ ಪ್ರತಿಜ್ಞಾ ವಿಧಿ ಸ್ವೀಕರಿಸಿದರು. ಸಮಾರಂಭದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><*<><>*><>

೧೮ನೇ ಲೋಕಸಭೆಯ ಅಧಿವೇಶನ ಇಂದು ಆರಂಭವಾಗಿದೆ. ನೂನತ ಸಂಸತ್ ಸದಸ್ಯರು ಇಂದು ಪ್ರಮಾಣವಚನ ಸ್ವೀಕರಿಸಿದರು. ಪ್ರಧಾನಿ ನರೇಂದ್ರ ಮೋದಿ ಮೊದಲಿಗೆ ಪ್ರಮಾಣ ವಚನ ಸ್ವೀಕರಿಸಿದರು. ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ಪ್ರಲ್ಹಾದ್ ಜೋಶಿ ವಿ. ಸೋಮಣ್ಣ, ಶೋಭಾ ಕರಂದ್ಲಾಜೆ ಲೋಕಸಭೆಯಲ್ಲಿ ಕನ್ನಡದಲ್ಲಿ ಪ್ರಮಾಣವಚನ ಸ್ವೀಕರಿಸಿ ಗಮನ ಸೆಳೆದರು. ೧೮ನೇ ಲೋಕಸಭೆಯ ಸದಸ್ಯನಾಗಿ, ಮಂಡ್ಯ ಮಹಾಜನತೆಯ ಪ್ರತಿನಿಧಿಯಾಗಿ ಮಾತೃಭಾಷೆಯಾದ ಕನ್ನಡಲ್ಲಿ ಪ್ರಮಾಣವಚನ ಸ್ವೀಕರಿಸಿದೆ. ಇದು ನನ್ನ ಬದುಕಿನ ಅವಿಸ್ಮರಣೀಯ, ಹೆಮ್ಮೆಯ ಕ್ಷಣ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ, ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ. ಭಾರತದ ಪ್ರಜಾಪ್ರಭುತ್ವ ದೇಗುಲದಲ್ಲಿ ಈ ಧನ್ಯತೆಯ ಕ್ಷಣಕ್ಕೆ ಕಾರಣೀಭೂತರಾದ ಮಂಡ್ಯ ಲೋಕಸಭೆ ಕ್ಷೇತ್ರದ ಜನತೆಗೆ ಧನ್ಯವಾದ ಸಲ್ಲಿಸಿದ್ದಾರೆ. ಇದಕ್ಕೂ ಮುನ್ನ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಒಡಿಶಾದ ಬಿಜೆಪಿ ಸಂಸದ ಹಾಗೂ ಹಂಗಾಮಿ ಸ್ಪೀಕರ್ ಭರ್ತೃಹರಿ ಮಹತಾಬ್ ಅವರಿಗೆ ಪ್ರಮಾಣವಚನ ಬೋಧಿಸಿದರು.

<><*<><>*><>

ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಭಾಗಿಯಾಗಿರುವ ಶಂಕೆಯ ಮೇರೆಗೆ ಸಂಜಯ್ ತುಕಾರಾಂ ಜಾಧವ್ ಮತ್ತು ಜಲೀಲ್ ಉಮರ್ ಖಾನ್ ಪಠಾಣ್ ಎಂಬುವವರನ್ನು ಮಹಾರಾಷ್ಟ್ರದ ನಾಂದೇಡ್ ಭಯೋತ್ಪಾದನಾ ನಿಗ್ರಹ ದಳ-ಎಟಿಎಸ್ ಬಂಧಿಸಿದೆ. ಬಂಧಿತರಿಬ್ಬರೂ ಜಿಲ್ಲಾ ಪರಿಷತ್ ಶಾಲೆಗಳಲ್ಲಿ ಶಿಕ್ಷಕರಾಗಿದ್ದು, ಲಾತೂರ್‌ನಲ್ಲಿ ಖಾಸಗಿ ಕೋಚಿಂಗ್ ಸಂಸ್ಥೆಗಳನ್ನು ನಡೆಸುತ್ತಿದ್ದಾರೆ. ಹಾಗೆಯೇ, ಈರಣ್ಣ, ಮಷ್ಣಜಿ, ಕೊಂಗಾಲ್ವಾರ್ ಮತ್ತು ದೆಹಲಿಯ ಗಂಗಾಧರ್ ಎಂಬ ಒಟ್ಟು ನಾಲ್ವರ ವಿರುದ್ಧ ಲಾತೂರ್‌ನ ಶಿವಾಜಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇದರ ವಿರುದ್ಧ ಸಾರ್ವಜನಿಕ

ಪರಿಕ್ಷೆಗಳ ಅಕ್ರಮ ಮಾರ್ಗಗಳ ತಡೆ ಕಾಯ್ದೆ ೨೦೨೪ ಮತ್ತು ಭಾರತೀಯ ದಂಡ ಸಂಹಿತೆಯ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಇಡೀ ಪ್ರಕರಣದ ತನಿಖೆಗಾಗಿ ಲಾತೂರ್ ನಗರ ಉಪವಿಭಾಗೀಯ ಪೊಲೀಸ್ ಅಧಿಕಾರಿ ಭಗವತ್ ಫಂಡೆ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸಲಾಗಿದೆ. ಈ ನಡುವೆ, ಬಿಹಾರದ ಹಜಾರಿಬಾಗ್ ಪರೀಕ್ಷಾ ಕೇಂದ್ರದಲ್ಲಿ ನೀಟ್-ಯುಜಿ ಪರೀಕ್ಷೆಯ ಪ್ರಶ್ನೆಪತ್ರಿಕೆಗಳ ಗೌಪ್ಯತೆಯ ತನಿಖೆಯ ಸಮಯದಲ್ಲಿ ಹಲವಾರು ಲೋಪಗಳು ಕಂಡುಬಂದಿವೆ ಎಂದು ಆರ್ಥಿಕ ಅಪರಾಧ ಘಟಕ ಹೇಳಿದೆ. ಸಂಜೀವ್ ಕುಮಾರ್ ಅಲಿಯಾಸ್ ಲೂಟಾನ್ ಮುಖಿಯಾ ಅಪರಾಧಿಕ ಗುಂಪಿನ ಮೂಲಕ ಸೋರಿಕೆಯಾದ ಪ್ರಶ್ನೆ ಪತ್ರಿಕೆಗಳು ಬಿಹಾರಕ್ಕೆ ತಲುಪಿವೆ ಎಂದು ತನಿಖಾ ಸಂಸ್ಥೆ ತಿಳಿಸಿದೆ.

<><*<><>*><>

ದೇಶಾದ್ಯಂತ ನಡೆದ ನೀಟ್ ಪ್ರಕರಣ ಕುರಿತಂತೆ ಕೇಂದ್ರ ಸರ್ಕಾರ ನಿಷ್ಪಕ್ಷಪಾತವಾಗಿ ತನಿಖೆ ನಡೆಸುತ್ತಿದೆ ಎಂದು ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ.ಕೆ ರಮೇಶ್  ತಿಳಿಸಿದ್ದಾರೆ.  ಆಕಾಶವಾಣಿ ಸುದ್ದಿವಿಭಾಗಕ್ಕೆ ಈ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ಇಂತಹ ಪರೀಕ್ಷೆಗಳ ಸಂದರ್ಭದಲ್ಲಿ ಮುಂಜಾಗೃತ ಕ್ರಮ ಕೈಗೊಳ್ಳುವುದು ಎಲ್ಲಾ ರಾಜ್ಯಗಳ ಜವಾಬ್ದಾರಿ ಎಂದು ಅವರು ತಿಳಿಸಿದರು. ಯಾವುದೇ ಕಾರಣಕ್ಕೂ ಪರೀಕ್ಷೆಗಳ ಪಾವಿತ್ರ್ಯತೆ ಹಾಳುಮಾಡಬಾರದು ಎಂದು ಅವರು ಅಭಿಪ್ರಾಯಪಟ್ಟಿದ್ದು, ವಿದ್ಯಾರ್ಥಿಗಳು ಭಯಕ್ಕೆ ಒಳಗಾಗದೇ ತಾಳ್ಮೆಯಿಂದಿರಬೇಕು ಎಂದು ಸಲಹೆ ನೀಡಿದ್ದಾರೆ.

**ಧ್ವನಿ : ಡಾ.ಎಂ.ಕೆ. ರಮೇಶ್**

<><*<><>*><>

ಹಾಸನ ಜಿಲ್ಲೆ, ಆಲೂರು ತಾಲ್ಲೂಕಿನ ಮುತ್ತಿಗೆ ಗ್ರಾಮದ ಕೆರೆಯಲ್ಲಿ ಮುಳುಗಿ ನಾಲ್ವರು ಮಕ್ಕಳು ಮೃತಪಟ್ಟ ಹಿನ್ನೆಲೆಯಲ್ಲಿ ಸಂತ್ರಸ್ತರ ಕುಟುಂಬಕ್ಕೆ ಇಂದು ಗೃಹ ಸಚಿವ ಜಿ. ಪರಮೇಶ್ವರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ. ಎನ್ ರಾಜಣ್ಣ ೨ ಲಕ್ಷ ರೂಪಾಯಿ ಪರಿಹಾರದ ಚೆಕ್ ವಿತರಿಸಿದರು. ಬಳಿಕ ಮಾತನಾಡಿದ ಪರಮೇಶ್ವರ್, ಕಳೆದ ಮೇ ೧೯ ರಂದು ದುರ್ಘಟನೆ ನಡೆದಿದ್ದು, ಗ್ರಾಮದ ನಾಲ್ವರು ಮಕ್ಕಳು ಮೃತಪಟ್ಟಿರುವುದು ಬೇಸರದ ಸಂಗತಿ ಎಂದು ತಿಳಿಸಿದ್ದಾರೆ. ಲೋಕಸಭಾ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದ ಹಿನ್ನೆಲೆಯಲ್ಲಿ ಸರ್ಕಾರದ ವತಿಯಿಂದ ಪರಿಹಾರ ನೀಡಲು ವಿಳಂಭವಾಗಿತ್ತು ಎಂದು ತಿಳಿಸಿದರು. ಮಕ್ಕಳನ್ನು ಕಳೆದುಕೊಂಡಿರುವ ಕುಟುಂಬಕ್ಕೆ ಇದು ಶಾಶ್ವತ ಪರಿಹಾರ ಅಲ್ಲ, ಮೃತ ಮಕ್ಕಳ ಕುಟುಂಬಗಳಿಗೆ ಆಗಿರುವ ನಷ್ಟವನ್ನು ಭರಿಸುವ ಶಕ್ತಿ ಯಾರಿಗೂ ಇಲ್ಲ ಎಂದು ಅವರು ಸಂತಾಪ ವ್ಯಕ್ತಪಡಿಸಿದರು.

<><*<><>*><>

ಕಾಂಗ್ರೆಸ್ ಪಕ್ಷ ಜೂನ್ ೨೫, ೧೯೭೫ ರಂದು 'ತುರ್ತು ಪರಿಸ್ಥಿತಿಯನ್ನು ದೇಶದ ಮೇಲೆ ಹೊರಿಸಿ ದ್ರೋಹವೆಸಗಿತ್ತು ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ತುರ್ತು ಪರಿಸ್ಥಿತಿ ಖಂಡಿಸಿ ಆಯೋಜಿಸಿದ್ದ ಪೊಸ್ಟರ್ ಅಭಿಯಾನದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಸಂವಿಧಾನಕ್ಕೆ ಅಪಚಾರ ಮಾಡಿತ್ತು ಎಂದು ಟೀಕಿಸಿದರು. ಭಾರತದ ಮೇಲೆ ಇಂದಿರಾ ಗಾಂಧಿಯವರು ಹೇರಿದ್ದ ತುರ್ತು ಪರಿಸ್ಥಿತಿಯನ್ನು ಖಂಡಿಸಿ ಈ ಸಂಬಂಧ ರಾಹುಲ್ ಗಾಂಧಿ ಕ್ಷಮೆ ಕೇಳಬೇಕೆಂದು ಅವರು ಆಗ್ರಹಿಸಿದರು.  ಬಿಜೆಪಿ ಸಂವಿಧಾನ ಬದಲಿಸಲಿದೆ ಎಂಬ ಸುಳ್ಳು ಪ್ರಚಾರ ಮಾಡಲಾಯಿತು. ಬಿಜೆಪಿ ಸಂವಿಧಾನದಲ್ಲಿ ಯಾವುದೇ ಬದಲಾವಣೆ ಮಾಡದೇ ಇದ್ದರೂ, ತಮ್ಮ ಪಕ್ಷದ ಮೇಲೆ ಅಪವಾದ ಹೊರಿಸಲಾಯಿತು ಎಂದರು. ಯಾವುದೇ ಕಾರಣಕ್ಕೂ ಸಂವಿಧಾನ ಬದಲಿಸುವ ಪ್ರಶ್ನೆಯೇ ಇಲ್ಲ ಎಂದು ನುಡಿದ ಅವರು, ಸಂವಿಧಾನ ತಮಗೆ ಭಗವದ್ಗೀತೆ ಇದ್ದಂತೆ ಎಂದು ಪ್ರಧಾನಿ ನರೇಂದ್ರ ಮೋದಿಯವರು ಹೇಳಿದ್ದಾರೆ ಎಂದು ಸ್ಪಷ್ಟಪಡಿಸಿದರು.  ಪ್ರತಿಭಟನೆಯಲ್ಲಿ ಬಳಸಿದ ಪೋಸ್ಟರ್‌ಗಳನ್ನು ಕಾಂಗ್ರೆಸ್ ಕಚೇರಿಯಲ್ಲಿ ಅಂಟಿಸುವುದಾಗಿ ಆರ್. ಅಶೋಕ ತಿಳಿಸಿದ್ದಾರೆ.

<><*<><>*><>

ಕಲಬುರಗಿ ವಿಮಾನ ನಿಲ್ದಾಣ ಸ್ಫೋಟಿಸುವುದಾಗಿ ಅನಾಮಧೇಯ ವ್ಯಕ್ತಿಯಿಂದ ಬಾಂಬ್ ಬೆದರಿಕೆ ಇ-ಮೇಲ್ ಬಂದಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ವಿಮಾನ ನಿಲ್ದಾಣದ ಎಲ್ಲ ಸ್ಥಳಗಳಲ್ಲಿ ಬಾಂಬ್ ನಿಷ್ಕ್ರಿಯ ದಳ, ಶ್ವಾನದಳ, ಪೊಲೀಸ್ ಅಧಿಕಾರಿಗಳು ಸತತ ಎರಡು ಗಂಟೆಗಳ ಕಾಲ ಪರಿಶೀಲನೆ ನಡೆಸಿದರು ಎಂದು ವರದಿಯಾಗಿದೆ. ಯಾವುದೇ ಬಾಂಬ್ ಪತ್ತೆಯಾಗದ ಹಿನ್ನೆಲೆ, ಹುಸಿ ಬಾಂಬ್ ಬೆದರಿಕೆಯ ಇ-ಮೇಲ್ ಬಗ್ಗೆ ತನಿಖೆ ನಡೆಸಲಾಗುವುದು ಎಂದು ವಿಮಾನ ನಿಲ್ದಾಣದ ಅಧಿಕಾರಿಗಳು ತಿಳಿಸಿದ್ದಾರೆ.

<><*<><>*><>

ವೈಜ್ಞಾನಿಕ ಕೃಷಿ ಪದ್ಧತಿ ಅನುಸರಣೆಯಿಂದ ರೈತರು ಉತ್ತಮ ಆದಾಯ ಗಳಿಸಲು ಸಾಧ್ಯ ಎಂದು ದಾವಣಗೆರೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಇಟ್ನಾಳ್ ಹೇಳಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮೀನುಗಾರಿಕೆ ಇಲಾಖೆ ವತಿಯಿಂದ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಯೋಜನೆಯಡಿ ಸ್ವ-ಸಹಾಯ ಸಂಘದ ಮಹಿಳೆಯರಿಗೆ ಮತ್ತು ಮೀನು ಕೃಷಿಕರಿಗೆ ಮೀನು ಸಾಕಾಣಿಕೆಯ ಕುರಿತು ಹಮ್ಮಿಕೊಂಡಿದ್ದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಇಂತಹ ಕಾರ್ಯಾಗಾರಗಳಿಂದ ಗ್ರಾಮೀಣ ಪ್ರದೇಶದ ಕೃಷಿಕರಿಗೆ ಪ್ರಯೋಜನವಾಗಲಿದೆ ಎಂದು ತಿಳಿಸದ್ದಾರೆ. ಸರ್ಕಾರದ ಯೋಜನೆಗಳನ್ನು ತಿಳಿದುಕೊಳ್ಳುವ ಮೂಲಕ ಮೀನುಗಾರರ ಹಾಗೂ ಕೃಷಿಕರು ಯೋಜನೆಗಳ ಲಾಭ ಪಡೆದು ತಮ್ಮ ಆದಾಯ ಹೆಚ್ಚಿಸಿಕೊಳ್ಳಬಹುದು ಎಂದು ಅವರು ಹೇಳಿದರು.

<><*<><>*><>

ಹವಾಮಾನ ವೈಪರಿತ್ಯದಿಂದ ಉಂಟಾಗುವ ತಾಪಮಾನ ಹೆಚ್ಚಳ ಮತ್ತು ಬರ ತಡೆಗೆ ಮರಗಿಡಗಳನ್ನು ಬೆಳೆಸಿ ಜಲಸಂರಕ್ಷಣಾ ಕಾಮಗಾರಿಗಳನ್ನು ಹೆಚ್ಚಾಗಿ ಕೈಗೊಳ್ಳುವ ಅಗತ್ಯವಿದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ. ವೆಂಕಟೇಶ್ ತಿಳಿಸಿದ್ದಾರೆ. ನೆಲ, ಜಲ ಹಾಗೂ ಪರಿಸರ ಸಂರಕ್ಷಣಾ ಆಂದೋಲನಾ ಸಮಿತಿ ಸದಸ್ಯರು ಹಾಗೂ ರೈತ ಮುಖಂಡರಿಗೆ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ ವರ್ಷದ ಭೀಕರ ಬರಗಾಲದಿಂದ ಸಾಕಷ್ಟು ಪಾಠ ಕಲಿಯಲಾಗಿದೆ. ನೀರು, ನೆಲ, ಪರಿಸರ, ಹವಾಮಾನ ಸಂರಕ್ಷಣೆಗಾಗಿ ಎಲ್ಲಾ ಇಲಾಖೆಗಳು ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡಬೇಕಾಗಿದೆ ಎಂದರು. ಜಿಲ್ಲೆಯಲ್ಲಿ ಪ್ರಸ್ತುತ ೫೬೫ ಕೆರೆಗಳಿದ್ದು, ಹೊಸ ಕೆರೆಗಳನ್ನು ನಿರ್ಮಾಣ ಮಾಡಿ ಮಳೆ ನೀರನ್ನು ಇಂಗಿಸಲಾಗುವುದು ಎಂದರು. ಪ್ರಾದೇಶಿಕ ಅರಣ್ಯ ಇಲಾಖೆ ವ್ಯಾಪ್ತಿಯಲ್ಲಿ ೩೬ ಕೆರೆಗಳಿದ್ದು ಇವುಗಳ ಹೂಳು ತಗೆದು ನೀರು ಸಂಗ್ರಹಕ್ಕೆ ಕ್ರಿಯಾ ಯೋಜನೆ ಸಿದ್ಧಪಡಿಸುವಂತೆ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೆಂಕಟೇಶ್ ಸೂಚಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><